ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 464 (522)

ಸದಸ್ಯರ ಹೆಸರು : ಶ್ರೀ ರಘುನಾಥ್ ರಾವ್ ಮಲ್ಕಾಪುರೆ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 09.03.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಉನ್ನತ ಶಿಕ್ಷಣ

ಕ್ರ ಸಂ	ಪ್ರಶ್ನೆ	ಉತ್ತರ
ಅ	2017-18 ಮತ್ತು 2019-20ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಯಾವ ಯಾವ ಸರ್ಕಾರಿ ಪದವಿ ಕಾಲೇಜುಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಹಣ ಬಿಡುಗಡೆ ಮಾಡಲಾಗಿದೆ.(ಬಿಡುಗಡೆ ಮೊತ್ತ ಸಹಿತ ಸಂಪೂರ್ಣ ವಿವರ ನೀಡುವುದು)	ಬೀದರ್ ಜಿಲ್ಲೆಯಲ್ಲಿ 09 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿರುತ್ತವೆ. ಸದರಿ ಕಾಲೇಜುಗಳಿಗೆ 2017-18 ಮತ್ತು 2019-2020 ನೇ ಸಾಲಿನಲ್ಲಿ ಮೂಲಸೌಕರ್ಯಗಳಾದ ವಿದ್ಯುತ್, ದೂರವಾಣಿ, ಕಛೇರಿ ವೆಚ್ಚ, ಮತ್ತಿತರೆ ವೆಚ್ಚಗಳಿಗೆ ಈ ಕೆಳಕಂಡಂತೆ ಹಣ ಬಿಡುಗಡೆ ಮಾಡಲಾಗಿದೆ.(ರೂ.ಗಳಲ್ಲಿ)

	ಬೀದರ್ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹೆಸರು	2017-18
1	ಬೀದರ್	260200.00
2	ಔರಾದ್	127800.00
3	ಬಸವಕಲ್ಯಾಣ	172400.00
4	ಬಾಲ್ಕಿ	137400.00
5	ಹುಮ್ನಾಬಾದ್	209900.00
6	ಚಿಟಗುಪ್ಪ	118100.00
7	ಮನಹಳ್ಳಿ	72600.00
8	ಹುಲಸೂರು	104100.00
9	ಮಹಿಳಾ ಕಾಲೇಜು, ಬೀದರ್	212000.00

ಕ್ರ ಸಂ	ಪ್ರಶ್ನೆ	ಉತ್ತರ
ಆ	ಬೀದರ್ ಜಿಲ್ಲೆಯಲ್ಲಿ 2017-18 ಹಾಗೂ 2019-20ನೇ ಸಾಲಿನ ಯಾವ ಯಾವ ಕಾಲೇಜುಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ.	ಬೀದರ್ ಜಿಲ್ಲೆಯಲ್ಲಿ 2017-18 ಹಾಗೂ 2019-20ನೇ ಸಾಲಿನ ಕಾಲೇಜುಗಳಲ್ಲಿ ಬೀದರ್ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ನಿವೇಶನ ಲಭ್ಯವಿಲ್ಲದ ಕಾರಣ ಸ್ವಂತ ಕಟ್ಟಡವಿರುವುದಿಲ್ಲ

ಇ	ಬೀದರ್ ಜಿಲ್ಲೆಯಾದ್ಯಾಂತ ಯಾವ ಯಾವ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡ ಕಟ್ಟಲು ಅನುದಾನ ಮಂಜೂರು ಮಾಡಲಾಗಿದೆ; ಕಟ್ಟಡ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)	➢ **ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬೀದರ್** 2019-20ನೇ ಸಾಲಿನಲ್ಲಿ ರೂಸಾ ಯೋಜನೆಯಡಿ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗಾಗಿ (ಹೆಚ್ಚುವರಿ ಕೊಠಡಿ ನಿರ್ಮಾಣಕ್ಕೆ) ರೂ.100.00ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ರೂ.60.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಕಾಮಗಾರಿಯನ್ನು ತ್ವರಿತವಾಗಿ ಪ್ರಾರಂಭಿಸಲಾಗುತಿದೆ. ➢ **ಹುಮ್ನಾಬಾದ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ** 2017-18ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ.100.00ಲಕ್ಷಗಳ ಅನುದಾನವನ್ನು ಹೆಚ್ಚುವರಿ ತರಗತಿ ಕೊಠಡಿ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಮಂಜೂರಾಗಿದ್ದು, ಈಗಾಗಲೇ ರೂ.70.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಯು ಲಿಂಟಲ್ ಹಂತದಲ್ಲಿರುತ್ತದೆ. ➢ **ಚಿಟಗುಪ್ಪ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ** 2017-18ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ.100.00ಲಕ್ಷಗಳ ಅನುದಾನವನ್ನು ಹೆಚ್ಚುವರಿ ತರಗತಿ ಕೊಠಡಿ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಮಂಜೂರಾಗಿದ್ದು, ಈಗಾಗಲೇ ರೂ.63.19ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಯು ತಳಪಾಯದ ಹಂತದಲ್ಲಿರುತ್ತದೆ. **ಹುಲಸೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ** 2017-18ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ.100.00ಲಕ್ಷಗಳ ಅನುದಾನವನ್ನು ಹೆಚ್ಚುವರಿ ತರಗತಿ ಕೊಠಡಿ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಮಂಜೂರಾಗಿದ್ದು, ಈಗಾಗಲೇ ರೂ.70.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಕಾಮಗಾರಿಯು ರೂಫ್ ಲೆವೆಲ್ ಹಂತದಲ್ಲಿರುತ್ತದೆ.

(ಡಾ|| ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಇಡಿ 29 ಹೆಚ್‌ಪಿಸಿ 2020